ಸಂಯುಕ್ತ ಕರ್ನಾಟಕ
ಹುಬ್ಬಳ್ಳಿ–ಬೆಂಗಳೂರು
ನಿಮ್ಮೂರಲ್ಲಿ - ನಮ್ಮವರು
ನಮ್ಮ ಪ್ರಕಟಣೆಗಳಾದ 'ಸಂಯುಕ್ತ ಕರ್ನಾಟಕ' ದಿನಪತ್ರಿಕೆ, 'ಕರ್ಮವೀರ' ವಾರಪತ್ರಿಕೆ ಹಾಗೂ 'ಕಸ್ತೂರಿ' ಮಾಸ ಪತ್ರಿಕೆ ಬೇಕಾದಲ್ಲಿ ಹಾಗೂ ಚಂದಾದಾರಾಗಲು ದಯವಿಟ್ಟು ಈ ಕೆಳಗಿನ ಪ್ರತಿನಿಧಿಗಳನ್ನು ಸಂಪರ್ಕಿಸಿ.
ಪ್ರಸಾರಾಂಗ
ಶ್ರೀ ಮನೋಜ್ ಭೀಮಕರ 98452 54006
ಪರಶುರಾಮ ಅದರಗುಂಚಿ 73492 92991
ಪ್ರಸಾರಾಂಗ ವಿಭಾಗ, ಹುಬ್ಬಳ್ಳಿ 0836/2364305
ಹಿರಿಯ ಪ್ರಸಾರಾಂಗ ವ್ಯವಸ್ಥಾಪಕರು 76250 66319
ಜಾಹೀರಾತುಗಳಿಗಾಗಿ
ಧಾರವಾಡ : ಮಹೇಶ ನಲೂಡಿ 91085 14025
ಹುಬ್ಬಳ್ಳಿ : ಚಂದ್ರಶೇಖರ ನಾವಳ್ಳಿ 76250 66131
ಸಂಜೀವ ಜೋಶಿ 95386 89899
ಸುಧೀಂದ್ರ ಹುಲಗೂರು 92432 66118
ಸುದ್ದಿಗಳಿಗಾಗಿ
ಧಾರವಾಡ : ರವೀಶ ಪವಾರ 99020 08421
ಹುಬ್ಬಳ್ಳಿ : ರಮೇಶ ಅಳವಂಡಿ 99020 98730

ಜಿಲ್ಲಾಮಟ್ಟದ ಪ್ರಗತಿಪರಿಶೀಲನಾ ಸಭೆ: ವಸತಿ ನಿಲಯ ದತ್ತು ತೆಗೆದುಕೊಳ್ಳಲು ಡಿಸಿ ಸೂಚನೆ

ಸರಕಾರಿ ಉದ್ಯೋಗಕ್ಕೆ ಸೀಮಿತರಾಗದೇ ಖಾಸಗಿಯತ್ತಲೂ ಗಮನಹರಿಸಲು ಸಲಹೆ

ಸಂ.ಕ.ಸಮಾಚಾರ ಧಾರವಾಡ: ಪ್ರತಿಯೊಬ್ಬ ಶಾಲಾ ಮಕ್ಕಳು ಗ್ರಹಿಕೆ, ಕಲಿಕೆ ಮತ್ತು ಜೀವನದ ಗುರಿ ಹೊಂದಿರಬೇಕು. ಯುವ ಜನತೆ ಸರ್ಕಾರಿ ಉದ್ಯೋಗಕ್ಕೆ ಸೀಮಿತವಾಗದೇ, ಖಾಸಗಿ ಉದ್ಯೋಗ ಪಡೆಯಲು ಉತ್ತೇಜನ ನೀಡಬೇಕು ಎಂದು ಜಿಲ್ಲಾಧಿಕಾರಿ ಸ್ನೇಹಲ್ ಆರ್. ಹೇಳಿದರು.

ಅವರು ಜಿಲ್ಲಾಧಿಕಾರಿಗಳ ಕಚೇರಿಯ ನೂತನ ಸಭಾಭವನದಲ್ಲಿ ಜಿಲ್ಲಾಮಟ್ಟದ ಅಧಿಕಾರಿಗಳೊಂದಿಗೆ ಜಿಲ್ಲೆಯ ಎಲ್ಲ ಇಲಾಖೆಯ ಪ್ರಗತಿ ಪರಿಶೀಲನೆ ಸಭೆ ಜರುಗಿಸಿ, ಮಾತನಾಡಿದರು. ಶಾಲೆಯಲ್ಲಿ 1 ರಿಂದ 8ನೇ ತರಗತಿಯ ವಿದ್ಯಾರ್ಥಿಗಳಿಗೆ ಓದಲು ಕಡ್ಡಾಯವಾಗಿ ಬರಲೇಬೇಕು. ಪ್ರತಿಯೊಂದು ಮಗುವಿಗೂ ವಿದ್ಯಾಭ್ಯಾಸದ ಜೊತೆಗೆ ಕ್ರೀಡೆಗೆ ಉತ್ತೇಜಿಸಬೇಕು. ಎಲ್ಲ ಜಿಲ್ಲಾಮಟ್ಟದ ಅಧಿಕಾರಿಗಳು ಒಂದು ಶಾಲೆ ಅಥವಾ ಒಂದು ವಸತಿ ನಿಲಯವನ್ನು ದತ್ತು ತೆಗೆದುಕೊಂಡು, ತಿಂಗಳಲ್ಲಿ ಒಂದು ದಿನ ಶಾಲಾ, ಕಾಲೇಜುಗಳಿಗೆ ಭೇಟಿ ನೀಡಿ, ಅಲ್ಲಿನ ಪರಿಸ್ಥಿತಿಯನ್ನು ತಿಳಿದು ಸಮಸ್ಯೆಗಳನ್ನು ಬಗೆಹರಿಸಲು ಪ್ರಯತ್ನಿಸಬೇಕು. ಬೇರೆ ಬೇರೆ ಉದ್ಯೋಗ ಅವಕಾಶಗಳ ಬಗ್ಗೆ ಜಾಗೃತಿ ಮೂಡಿಸಬೇಕು. ಒಂದು ಶಾಲೆ, ಒಂದು ಕಲೆ, ಒಂದು ಕ್ರೀಡೆ ಎಂಬಂತೆ ಒಳ್ಳೆಯ ಉದ್ದೇಶದಿಂದ ಎಲ್ಲರೂ ಒಗ್ಗೂಡಿ ಕೆಲಸ ನಿರ್ವಹಿಸಬೇಕು ಎಂದು ತಿಳಿಸಿದರು.

ಧಾರವಾಡದ ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ಜಿಲ್ಲಾ ಮಟ್ಟದ ಅಧಿಕಾರಿಗಳ ಸಭೆಯಲ್ಲಿ ಮಾತನಾಡಿದರು. ಜಿಪಂ ಸಿಇಒ ಭುವನೇಶ ಪಾಟೀಲ, ಅನುಪ್ರಿಯಾ ಸಾಕ್ಯಾ, ಗೀತಾ ಸಿ.ಡಿ. ಗುಂಜನ್ ಆರ್ಯ ಇದ್ದರು.

ಸಹಕಾರ ನೀಡಿ

ಧಾರವಾಡ ಜಿಲ್ಲೆಯಲ್ಲಿ ಸ್ಪರ್ಧಾತ್ಮಕ ಪರೀಕ್ಷೆಗೆ ತಯಾರಿ ನಡೆಸುತ್ತಿರುವ ವಿದ್ಯಾರ್ಥಿಗಳು ಒಂದೇ ಉದ್ಯೋಗಕ್ಕೆ ತಯಾರಿ ನಡೆಸದೇ, ಎಲ್ಲ ಖಾಸಗಿ ಉದ್ಯೋಗವನ್ನು ಪಡೆಯಲು ಪ್ರಯತ್ನಿಸಬೇಕು. ಸರ್ಕಾರದ ಯೋಜನೆಗಳ ಜೊತೆಗೆ ವಿದ್ಯಾರ್ಥಿಗಳಿಗೆ ಪ್ರೇರಣೆ ನೀಡಿ, ಉದ್ಯೋಗಾವಕಾಶಗಳ ಬಗ್ಗೆ ಮಾಹಿತಿ ನೀಡೋಣ. ಎಲ್ಲ ಅಧಿಕಾರಿಗಳು ಸಹಕಾರ ನೀಡಬೇಕು ಎಂದು ಹೇಳಿದರು.

ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಭುವನೇಶ ಪಾಟೀಲ ಅವರು ಮಾತನಾಡಿ, ವಿದ್ಯಾರ್ಥಿಗಳಿಗೆ ಉತ್ತೇಜನ, ಪ್ರೇರಣೆ ನೀಡುವುದರಿಂದ ಜೊತೆಗೆ ಒಳ್ಳೆಯ ಸ್ಪರ್ಧಾತ್ಮಕ ಪರೀಕ್ಷಾ ಕೇಂದ್ರಗಳು ಮತ್ತು ಪುಸ್ತಕಗಳ ಬಗ್ಗೆ ಮಾಹಿತಿ ನೀಡಬೇಕು. ಪಿಯುಸಿ, ಪದವಿ ಪಾಸ್ ಆದಂತಹ ವಿದ್ಯಾರ್ಥಿಗಳಿಗೆ ಉದ್ಯೋಗಾವಕಾಶಗಳ ಬಗ್ಗೆ ಜಾಗೃತಿ ಮೂಡಿಸಬೇಕು ಎಂದರು.

ಪೊಲೀಸ್ ವರಿಷ್ಠಾಧಿಕಾರಿ ಗುಂಜನ್ ಆರ್ಯ ಮಾತನಾಡಿದರು. ಪ್ರೊಬೇಷನರಿ ಐಎಎಸ್ ಅಧಿಕಾರಿ ಅನುಪ್ರಿಯಾ ಸಾಕ್ಯಾ, ಅಪರ ಜಿಲ್ಲಾಧಿಕಾರಿ ಗೀತಾ ಸಿ. ಡಿ., ಅರಣ್ಯ ಇಲಾಖೆಯ ಡಿಎಫ್‌ಓ ಪ್ರಾದೇಶಿಕ ವಿಭಾಗದ ಉಪಅರಣ್ಯ ಸಂರಕ್ಷಣಾಧಿಕಾರಿ ಶೇಕ್ ಅಲಿಂ ಸಿದ್ದಿಕಿ ಇದ್ದರು.

ಅಂಚೆ ಚೀಟಿ, ನಾಣ್ಯ ಪ್ರದರ್ಶನ ನಾಳೆ



ಹುಬ್ಬಳ್ಳಿ: ಚಾಲುಕ್ಯ ಅಂಚೆ ಚೀಟಿ ಹಾಗೂ ನಾಣ್ಯ ಸಂಗ್ರಹಕಾರರ ಸಂಘದ ವತಿಯಿಂದ ಸ್ವಾತಂತ್ರೋತ್ಸವ ಅಂಗವಾಗಿ ಕೊಪ್ಪಿಕರ ರಸ್ತೆ ಸಂಯುಕ್ತ ಕರ್ನಾಟಕ ಪತ್ರಿಕೆ ಆವರಣದಲ್ಲಿರುವ ಕಬ್ಬೂರ ಸಭಾಂಗಣದಲ್ಲಿ ಆ.15ರಂದು ಬೆಳಗ್ಗೆ 10 ರಿಂದ ಸಂಜೆ 5ರವರೆಗೆ ಅಂಚೆ ಚೀಟಿ, ಪ್ರಾಚೀನ ನಾಣ್ಯಗಳು ಮತ್ತು ಭಾರತೀಯ ನೋಟುಗಳ ಪ್ರದರ್ಶನ ಹಮ್ಮಿಕೊಳ್ಳಲಾಗಿದೆ. ಶಾಲಾ ವಿದ್ಯಾರ್ಥಿ–ವಿದ್ಯಾರ್ಥಿನಿಯರು, ಶಿಕ್ಷಕರು, ಶಿಕ್ಷಕಿಯರು, ಆಸಕ್ತರು, ಸಂಘ ಸಂಸ್ಥೆ ಪ್ರತಿನಿಧಿಗಳು ಭೇಟಿ ನೀಡಿ ಅಪರೂಪದ ಮಾಹಿತಿ ಪಡೆದುಕೊಳ್ಳಬೇಕು ಎಂದು ಸಂಸ್ಥೆ ಮನವಿ ಮಾಡಿದೆ.

ರೀಲ್ಸ್ ಅವಾಂತರ ಪ್ರೇಮಿಗಳ ಆತ್ಮಹತ್ಯೆ

ಧಾರವಾಡ: ರೀಲ್ಸ್ ನೋಡಬೇಡ ಎಂದಿದ್ದಕ್ಕೆ ಮನನೊಂದ ಯುವತಿಯೋರ್ವಳು ಆತ್ಮಹತ್ಯೆ ಮಾಡಿಕೊಂಡ ವಿಷಯ ತಿಳಿದ ಪ್ರಿಯಕರ ನೇಣು ಬಿಗಿದುಕೊಂಡು ಆತ್ಮಹತ್ಯೆಗೆ ಶರಣಾದ ಘಟನೆ ಸಂಭವಿಸಿದೆ.

ತಾಲೂಕಿನ ಕೊಟಬಾಗಿ ಗ್ರಾಮದ ಮೇಘಾ ಗುಬ್ಬನ್ನವರ(20) ಎಂಬ ಯುವತಿಯೇ ಆತ್ಮಹತ್ಯೆಗೆ ಶರಣಾಗಿರುವುದು. ಖಾಸಗಿ ಕಾಲೇಜಿನಲ್ಲಿ ಡಿಎಡ್ ವ್ಯಾಸಂಗ ಮಾಡುತ್ತಿದ್ದ ಮೇಘಾ ಮನೆಯಲ್ಲಿ ನಿರಂತರ ರೀಲ್ಸ್ ನೋಡುತ್ತಲೇ ಕುಳಿತಿರುತ್ತಿದ್ದಳು. ಇದರಿಂದ ಬೇಸತ್ತಿದ್ದ ತಾಯಿ ರೀಲ್ಸ್ ಮಾಡಬೇಡ ಎಂದು ಬುದ್ಧಿವಾದ ಹೇಳಿದ್ದಕ್ಕೆ ಮನನೊಂದು ಮನೆಯಲ್ಲಿಯೇ ಮೇಘಾ ವಿಷ ಸೇವಿಸಿ ಆತ್ಮಹತ್ಯೆಗೆ ಶರಣಾಗಿದ್ದಳು. ಈ ಕುರಿತು ಗರಗ ಠಾಣೆಯಲ್ಲಿ ಪ್ರಕರಣ ದಾಖಲಾಗಿತ್ತು. ತನ್ನ ಪ್ರೇಯಸಿ ಆತ್ಮಹತ್ಯೆ ಮಾಡಿಕೊಂಡಿದ್ದಾಳೆ ವಿಷಯ ತಿಳಿದ ಅದೇ ಗ್ರಾಮದ ತರುಣ ಸಾಗರ ಕುರಕುರಿ(21) ಎಂಬ ಯುವಕ ಧಾರವಾಡದ ಪಿಜಿಯೊಂದರಲ್ಲಿಯ ಸ್ನೇಹಿತನ ಕೋಣೆಯಲ್ಲಿ ನೇಣು ಬಿಗಿದುಕೊಂಡು ತಾನೂ ಆತ್ಮಹತ್ಯೆಗೆ ಶರಣಾಗಿದ್ದಾನೆ. ಇಲ್ಲಿಯ ವಾಚ್ ಅಂಗಡಿಯಲ್ಲಿ ತರುಣಸಾಗರ ಕೆಲಸ ಮಾಡುತ್ತಿದ್ದನು ಎನ್ನಲಾಗಿದೆ. ಈ ಕುರಿತು ವಿದ್ಯಾಗಿರಿ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ. ಆದರೆ, ಇದಕ್ಕೆ ಪ್ರತಿಕ್ರಿಯೆ ನೀಡಿದ ಪೊಲೀಸ್ ವರಿಷ್ಠಾಧಿಕಾರಿ ಗುಂಜನ್ ಆರ್ಯ, ಇಬ್ಬರೂ ಪ್ರೀತಿ ಮಾಡುತ್ತಿದ್ದರೋ ಇಲ್ಲವೋ ಎನ್ನುವುದು ತನಿಖೆ ನಡೆಸಲಾಗುತ್ತಿದೆ. ತನಿಖೆ ಪೂರ್ಣಗೊಂಡ ಬಳಿಕವೇ ಸತ್ಯ ಹೊರಬರಲಿದೆ ಎಂದು ತಿಳಿಸಿದರು.

SK CLASSIFIED
ಹುಬ್ಬಳ್ಳಿ ಆವೃತ್ತಿ ದರ

ಅಳತೆ	ದರ	ಕೊಡುಗೆ
4x5	790/-	3+1 - 5+2
4x10	1260/-	3+1 - 5+2

Shri Basaveshwar Rural Education and Development Trust (R) SATTUR, DHARWAD
ADMISSIONS OPEN FOR
BHMS
D/B PHARMACY
Contact : 9945877769
BHMS
9743330379-8088388050
8904246922-Pharmacy
ಓದುಗರ ಗಮನಕ್ಕೆ
ಪತ್ರಿಕೆಯಲ್ಲಿ ಪ್ರಕಟವಾಗುವ ಜಾಹೀರಾತುಗಳು ವಿಶ್ವಾಸಾರ್ಹವೇ ಆದರೂ ಅವುಗಳನ್ನು ಮಾಹಿತಿ, ವಸ್ತುಗಳು-ದೋಷ, ಗುಣಮಟ್ಟ ಮುಂತಾದವುಗಳ ಕುರಿತು ಆಸಕ್ತ ಸಾರ್ವಜನಿಕರು ಜಾಹೀರಾತುದಾರರೊಂದಿಗೆ ವ್ಯವಹರಿಸಬೇಕಾಗುತ್ತದೆ. ಆದಕ್ಕೆ ಪತ್ರಿಕೆ ಜವಾಬ್ದಾರಿಯಾಗುವುದಿಲ್ಲ.
- ಜಾಹೀರಾತು ವ್ಯವಸ್ಥಾಪಕರು
NEFT (ನೆಫ್ಟ್) ಮೂಲಕ ಬ್ಯಾಂಕ್ ಖಾತೆಗೆ ಹಣ ಸಂದಾಯಿಸುವ ವಿವರ
1) A/c No. (ಖಾತೆ ಸಂ.) 0832000101347401
2) IFSC CODE (ಐಎಫ್‌ಎಸ್‌ಸಿ ಸಂಕೇತ): KARB 0000083
3) ಹಣ ಸಂದಾಯದ ಹೆಸರು: LOKA SHIKSHANA TRUST
4) ಬ್ಯಾಂಕ್ ಹೆಸರು : KARNATAKA BANK
BRANCH: KASTURBA ROAD, BANGALORE-560001.
5) ಫ್ಯಾನ್ ಸಂಖ್ಯೆ: AAATL 1086H
6) ವಿ.ಸೂ: ತಾವು ಜಮೆ ಮಾಡಿದ ಚೇ ಇನ್ ಸ್ಲಿಪ್ ಜೊತೆಗೆ ಪ್ರಕಟಿಸಬೇಕಾದ ಜಾಹೀರಾತನ್ನು ಸಂ.ಕ. ಕಚೇರಿಗೆ ಕಳುಹಿಸಬೇಕು.
* ಡಿ.ಡಿ. ಕಳಿಸುವುದಿದ್ದಲ್ಲಿ ಸಂಯುಕ್ತ ಕರ್ನಾಟಕ ಹೆಸರಿನಲ್ಲಿ ಕಳುಹಿಸಬೇಕು.

Edition	Bangalore	Gulburga	Davanagere	Mangalore	All Edition
*Disply Classified	Rs. 40-00	Rs.15-00	Rs. 15-00	Rs. 15-00	Rs.80-00

ಸಂಯುಕ್ತ ಕರ್ನಾಟಕ ಕ್ಲಾಸಿಫೈಡ್ಸ್
ಚಿಕ್ಕ ಜಾಹೀರಾತು..... ಅಗಾಧ ಫಲಿತಾಂಶ! ಜಾಹೀರಾತಿಗಾಗಿ ಸಂಪರ್ಕಿಸಿರಿ:
ಸಂಪರ್ಕಿಸಿರಿ: ಮೊ: 9900049656
ಇ-ಮೇಲ್: skhubli@gmail.com

ಕರ್ನಾಟಕ ವೃತ್ತಿಪರ ಸಿವಿಲ್ ಇಂಜಿನಿಯರ್ಸ್ ಕಾಯ್ದೆ ಜಾರಿಗೆ ಆಗ್ರಹ

ಹುಬ್ಬಳ್ಳಿ: ಗೆಜೆಟ್ ನೋಟಿಫಿಕೇಶನ್ ಆದರೂ ಕರ್ನಾಟಕ ವೃತ್ತಿಪರ ಸಿವಿಲ್ ಇಂಜಿನಿಯರ್ಸ್ ಕಾಯ್ದೆ–2024 ಜಾರಿಗೆ ತರಲು ಸರಕಾದ ವಿಳಂಬ ಧೋರಣೆ ಖಂಡಿಸಿ ಇಂಡಿಯನ್ ಕಾಂಕ್ರೀಟ್ ಇನ್‌ಸ್ಟಿಟ್ಯೂಟ್ ಹಾಗೂ ಸಿವಿಲ್ ಇಂಜಿನಿಯರ್‌ಗಳ ಒಕ್ಕೂಟ ತೀವ್ರ ಅಸಮಾಧಾನ ವ್ಯಕ್ತಪಡಿಸಿದೆ.

ಈ ಕುರಿತು ಪ್ರಕಟಣೆ ನೀಡಿ, ರಾಜ್ಯಪಾಲರ ಅನುಮೋದನೆ ಹಾಗೂ ಗೆಜೆಟ್ ಅಧಿಸೂಚನೆಯಾಗಿ 2 ವರ್ಷ ಕಳೆದರೂ ಕಾರ್ಯರೂಪಕ್ಕೆ ತರಲು ಅಧಿಕಾರಿಗಳು ವಿಳಂಬ ಮಾಡುತ್ತಿದ್ದಾರೆ ಎಂದು ಆಕ್ರೋಶ ವ್ಯಕ್ತಪಡಿಸಿದರು.

ರಾಜ್ಯದಲ್ಲಿ ಕಟ್ಟಡಗಳು, ರಸ್ತೆಗಳು, ಸೇತುವೆಗಳು ಹಾಗೂ ಮೂಲಸೌಕರ್ಯ ಯೋಜನೆಗಳಲ್ಲಿ ತಾಂತ್ರಿಕ ನಿಖರತೆ ಮತ್ತು ಗುಣಮಟ್ಟ ಕಾಯ್ದುಕೊಳ್ಳುವುದು ಈ ಕಾಯ್ದೆ ಅಗತ್ಯವಾಗಿದೆ. ಆದರೆ ಕಾಯ್ದೆ ಜಾರಿಯಾಗದೆ ಕಳಪೆ ಕಾಮಗಾರಿ ಮಾಡುವವರಿಗೆ ರಕ್ಷಣೆ ಸಿಗುವಂತಾಗಿದೆ. ಪರಿಷತ್ತು ಸ್ಥಾಪನೆಯಾಗಿ ಅರ್ಹ ಸದಸ್ಯರ ನೇಮಕವಾದರೂ ಕಾರ್ಯಾರಂಭ ಮಾಡಿಲ್ಲ. ಯಾವುದೇ

ತಿರಂಗಾ ಬೈಕ್ ರ‍್ಯಾಲಿ ನಾಳೆ

ಹುಬ್ಬಳ್ಳಿ: ಭಗತ್ ಸಿಂಗ್ ಸೇವಾ ಸಂಘದ ವತಿಯಿಂದ 80ನೇ ಸ್ವಾತಂತ್ರ್ಯೋತ್ಸವ ಅಂಗವಾಗಿ ಆ.15ರಂದು ಬೆಳಗ್ಗೆ 10.30ಕ್ಕೆ ತಿರಂಗಾ ಬೈಕ್ ರ‍್ಯಾಲಿ ಹಮ್ಮಿಕೊಳ್ಳಲಾಗಿದೆ ಎಂದು ಸಂಘದ ಅಧ್ಯಕ್ಷ ವಿಶಾಲ ಜಾಧವ ಹೇಳಿದರು.

ನಗರದಲ್ಲಿ ಗುರುವಾರ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿ, ಕುಸುಗಲ್ ರಸ್ತೆಯಿಂದ ಪ್ರಾರಂಭವಾಗಿ ಕೇಶ್ವಾಪುರ ವೃತ್ತ, ಕಾನ್ವೆಂಟ್ ಶಾಲೆ, ಸ್ಟೇಶನ್ ರಸ್ತೆ, ಮರಾಠಾ ಗಲ್ಲಿ, ಕೊಪ್ಪಿಕರ ರಸ್ತೆ, ಮಹಾನಗರ ಪಾಲಿಕೆ ರಸ್ತೆ ಮೂಲಕ ಕಿತ್ತೂರ ರಾಣಿ ಚನ್ನಮ್ಮ ವೃತ್ತ ತಲುಪಿ ಮುಕ್ತಾಯವಾಗಲಿದೆ ಎಂದರು.

ಶ್ರಾವಣ ಮಾಸದ ಅಂಗವಾಗಿ ಹುಬ್ಬಳ್ಳಿ ಆರಾಧ್ಯ ದೈವ ಸಿದ್ಧಾರೂಢ ಮಠದಲ್ಲಿರುವ ಗೋಶಾಲೆ ಸ್ವಚ್ಛತೆ ಹಾಗೂ ಪುಷ್ಕರಣಿ ಸ್ವಚ್ಛತಾ ಕಾರ್ಯಕ್ರಮವನ್ನು ಆ.23ರಂದು ಆಯೋಜಿಸಲಾಗಿದೆ. ಆ.15ರಂದು ನಡೆಯುವ ಬೈಕ್ ರ‍್ಯಾಲಿಯಲ್ಲಿ ಸುಮಾರು 600 ರಿಂದ 700 ಜನ ಬೈಕ್ ಸವಾರರು ಪಾಲ್ಗೊಳ್ಳುವ ನಿರೀಕ್ಷೆ ಇದೆ. ರ‍್ಯಾಲಿಯಲ್ಲಿ ಪಾಲ್ಗೊಳ್ಳುವವರಿಗೆ ಹೆಲ್ಮೆಟ್ ಕಡ್ಡಾಯ ಎಂದು ಹೇಳಿದರು.ರಂಗಾನಾಯಕ ತಪೇಲಾ, ಹರೀಶ ಸರ್ವಳೆ, ಮಹೇಶ ತಪೇಲಾ, ಅಭಿಷೇಕ ಕಲಾಲ ಇದ್ದರು.

ಕರ್ನಾಟಕ ಬಂದ್ ಬೆಂಬಲಿಸಿ ಪ್ರತಿಭಟನೆ

ಸಂ.ಕ.ಸಮಾಚಾರ ನವಲಗುಂದ: ಕರ್ನಾಟಕ ಬಂದ್‌ಗೆ ಕನ್ನಡ ಒಕ್ಕೂಟದ ಅಧ್ಯಕ್ಷ ವಾಟಾಳ್ ನಾಗರಾಜ್ ನೀಡಿರುವ ಕರೆಗೆ ಮಹದಾಯಿ ಕಳಸಾ, ಬಂಡೂರಿ ರೈತ ಹೋರಾಟ ಕೇಂದ್ರ ಸಮಿತಿ ಬೆಂಬಲ ವ್ಯಕ್ತಪಡಿಸಿತು.

ತಮಿಳುನಾಡಿಗೆ 12 ಸಾವಿರ ಕ್ಯೂಸೆಕ್ ನೀರನ್ನು 15 ದಿನಗಳ ಕಾಲ ಹರಿಸುವಂತೆ ಕಾವೇರಿ ನೀರು ನಿರ್ವಹಣಾ ಮಂಡಳಿ ನೀಡಿರುವ ಆದೇಶವನ್ನು ಸಮಿತಿ ಖಂಡಿಸಿದೆ. ಈ ಆದೇಶವನ್ನು ಪುನರ್‌ಪರಿಶೀಲಿಸಿ ತಮಿಳುನಾಡಿಗೆ ನೀರು ಹರಿಸುವುದನ್ನು ತಕ್ಷಣ ನಿಲ್ಲಿಸಬೇಕು ಎಂದು ಒತ್ತಾಯಿಸಿದೆ.

ಬರದಿಂದ ಸಂಕಷ್ಟದಲ್ಲಿರುವ ಜನರಿಗೆ ಉದ್ಯೋಗ ಹಾಗೂ ಜಾನುವಾರುಗಳಿಗೆ ಅಗತ್ಯ ಮೇವು ಒದಗಿಸಬೇಕು. ರಾಷ್ಟ್ರೀಕೃತ ಬ್ಯಾಂಕುಗಳು ರೈತರ ಸಿಬಿಲ್ ದಾಖಲೆಯನ್ನು ಪರಿಗಣಿಸಿ ಸಾಲ ನೀಡುವುದನ್ನು ನಿರಾಕರಿಸಬಾರದು. ಸಹಕಾರಿ ಹಾಗೂ ರಾಷ್ಟ್ರೀಕೃತ ಬ್ಯಾಂಕುಗಳ ಮೂಲಕ ರೈತರಿಗೆ ಸಂಪೂರ್ಣ ಸಾಲ ಮನ್ನಾ ಮಾಡಬೇಕು ಎಂದು ಸಮಿತಿ ಒತ್ತಾಯಿಸಿದೆ.

ಮಹದಾಯಿ ಕಳಸಾ, ಬಂಡೂರಿ ರೈತ ಹೋರಾಟ ಕೇಂದ್ರ ಸಮಿತಿ ಪದಾಧಿಕಾರಿಗಳು ಕರ್ನಾಟಕ ಬಂದ್‌ಗೆ ಕನ್ನಡ ಒಕ್ಕೂಟದ ಅಧ್ಯಕ್ಷ ವಾಟಾಳ್ ನಾಗರಾಜ್ ನೀಡಿರುವ ಕರೆಗೆ ಬೆಂಬಲಿಸಿ ನವಲಗುಂದದಲ್ಲಿ ಪ್ರತಿಭಟನೆ ನಡೆಸಿದರು.

ತಹಶೀಲ್ದಾರ್ ಮೂಲಕ ಕೇಂದ್ರ ಸಚಿವ ಪ್ರಲ್ಹಾದ ಜೋಶಿ, ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ, ಕಂದಾಯ ಸಚಿವ ಜಿ. ಪರಮೇಶ್ವರ, ಕೃಷಿ ಸಚಿವ ಚಲುವರಾಯಸ್ವಾಮಿ, ಸಹಕಾರ ಸಚಿವ ಲಕ್ಷ್ಮಣ ಸವದಿ, ಜಿಲ್ಲಾ ಉಸ್ತುವಾರಿ ಸಚಿವ ಸತೀಶ ಜಾರಕಿಹೊಳಿ, ಕಾರ್ಮಿಕ ಸಚಿವ ಸಂತೋಷ ಲಾಡ್, ಶಾಸಕ ಎನ್.ಎಚ್. ಕೋನರಡ್ಡಿ, ಕರ್ನಾಟಕ ರಾಜ್ಯ ಮಾನವ ಹಕ್ಕುಗಳ ಆಯೋಗದ ಅಧ್ಯಕ್ಷರು ಹಾಗೂ ಕೃಷಿ ಆಯುಕ್ತರಿಗೆ ಮನವಿ ಸಲ್ಲಿಸಲಾಯಿತು.

ಯಲ್ಲಪ್ಪ ದಾಡಿಬಾವಿ, ಸುಭಾಷಚಂದ್ರಗೌಡ ಪಾಟೀಲ, ಸಿದ್ದಲಿಂಗಪ್ಪ ಹಳ್ಳದ, ರವಿ ತೋಟದ, ಗಂಗಪ್ಪ ಸಂಗಟಿ, ಉಮೇಶಗೌಡ ತುಪ್ಪದಗೌಡ್ರ, ಶಿವಣ್ಣ ಹುಬ್ಬಳ್ಳಿ, ಫಕ್ಕಿರಗೌಡ ಬಸನಗೌಡ, ಗೋವಿಂದರಡ್ಡಿ ಮೊರಬದ, ಗುರಪ್ಪ ಗಡ್ಡಿ ಇದ್ದರು.

ಪುರಾಣ ಪ್ರವಚನ

ಹುಬ್ಬಳ್ಳಿ: ಗೋಪನಕೊಪ್ಪದ ಶ್ರೀ ಪರಮಹಂಸ ಸದ್ಗುರು ಸಿದ್ಧವೀರಸ್ವಾಮಿಗಳವರ ಮಠದಲ್ಲಿ ಆ.13 ರಿಂದ ಸೆಪ್ಟೆಂಬರ್ 12ರವರೆಗೆ ಸಂಜೆ 6 ರಿಂದ 8 ಗಂಟೆಯವರೆಗೆ ಸಿದ್ಧಾರೂಢಸ್ವಾಮಿಗಳ ಜೀವನ ಚರಿತ್ರೆ, ಕಲ್ಪದ್ರುಮ ಪುರಾಣ ಪ್ರವಚನ ಶಂಕ್ರಪ್ಪ ಮಾನೇದ ಅಧ್ಯಕ್ಷತೆಯಲ್ಲಿ ಜರುಗಲಿದೆ.

130 ಹೆಚ್ಚುವರಿ ವಿಶೇಷ ಬಸ್ ಸಂಚಾರ

ಹುಬ್ಬಳ್ಳಿ: ಸ್ವಾತಂತ್ರ್ಯ ದಿನಾಚರಣೆ ಮತ್ತು ವಾರಾಂತ್ಯದ ಹಿನ್ನೆಲೆಯಲ್ಲಿ ವಾಯವ್ಯ ಕರ್ನಾಟಕ ರಸ್ತೆ ಸಾರಿಗೆ ಸಂಸ್ಥೆ ಹೆಚ್ಚುವರಿ ಬಸ್‌ಗಳನ್ನು ಓಡಿಸಲು ನಿರ್ಧರಿಸಿದೆ. ಆ.14 ಮತ್ತು ಆ.15ರಂದು ಬೆಂಗಳೂರು ಕೆಂಪೇಗೌಡ ಬಸ್ ನಿಲ್ದಾಣದಿಂದ 130 ಹೆಚ್ಚುವರಿ ವಿಶೇಷ ಬಸ್‌ಗಳು ಸಂಚರಿಸಲಿವೆ. ಹುಬ್ಬಳ್ಳಿ, ಧಾರವಾಡ, ಗದಗ, ಬೆಳಗಾವಿ, ಉತ್ತರಕನ್ನಡ, ಹಾವೇರಿ, ಚಿಕ್ಕೋಡಿ ಮತ್ತು ಬಾಗಲಕೋಟೆ ವಿಭಾಗಗಳಿಂದಲೂ ಹೆಚ್ಚುವರಿ ಸಾರಿಗೆ ವ್ಯವಸ್ಥೆ ಮಾಡಲಾಗಿದೆ.

ದಿ ಹುಬ್ಬಳ್ಳಿ ಅರ್ಬನ್ ಕೋ-ಆಪರೇಟಿವ್ ಬ್ಯಾಂಕ್ ಲಿ.
ಸರ್ ಸಿದ್ದಪ್ಪ ಕಂಬಳಿ ರಸ್ತೆ, ಹುಬ್ಬಳ್ಳಿ - 20. ಫೋನ್ ನಂ : 2228219
120 ನೇ ವಾರ್ಷಿಕ ಸರ್ವ ಸಾಧಾರಣ ಸಭೆಯ ನೋಟೀಸು
ಮಾನ್ಯರೇ, ಬ್ಯಾಂಕಿನ ಯಾವತ್ತೂ ಸದಸ್ಯರಿಗೆ ಈ ಮೂಲಕ ತಿಳಿಸುವುದೇನೆಂದರೆ, ನಮ್ಮ ಬ್ಯಾಂಕಿನ ಸನ್ 2025-26 ನೇ ಸಾಲಿನ ವಾರ್ಷಿಕ ಮಹಾಸಭೆಯನ್ನು ರವಿವಾರ ದಿ॥ 30-08-2026 ರಂದು ಮುಂಜಾನೆ 11 ಘಂಟೆಗೆ ದೇಶಪಾಂಡೆ ನಗರದಲ್ಲಿರುವ "ಸವಾಯಿ ಗಂಧರ್ವ ಕಲಾಮಂದಿರ" ದಲ್ಲಿ ಕರೆಯಲಾಗಿದೆ. ಪ್ರಸ್ತುತ ವರ್ಷದ ಮಹಾಸಭೆಯಲ್ಲಿ ಚರ್ಚಿಸತಕ್ಕ ವಿಷಯಗಳ ಪಟ್ಟಿ ಈ ಕೆಳಗಿನಂತೆ ಇರುತ್